**ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ದಾಂಡೇಲಿ**

**ಕ್ರಿಮೀನಲ್ ಮೊಕದ್ದಮೆ ನಂ. 590/2024.**

ಚಾಸಾ-20

ಪ್ರಾಸಾ-07

**ದಿನಾಂಕಃ 20-07-2026 ರಂದು ಸತ್ಯ ಪ್ರತಿಜ್ಞೆ ಮೇಲೆ ಸಾಕ್ಷಿಗೆ ಪ್ರಮಾಣ ವಚನವನ್ನು ಭೋಧಿಸಲಾಯಿತು .**

| | | |
|---|---|---|
| ಸಾಕ್ಷಿಯ ಹೆಸರು | ಃ | ಕೃಷ್ಣಕಾಂತ ತಃ ಅಯ್ಯಪ್ಪಾ ಪಾಟೀಲ |
| ವಯಸ್ಸು | ಃ | 32 ವರ್ಷ |
| ಉದ್ಯೋಗ | ಃ | ಪಿ ಎಸ್ ಐ, ಕದ್ರಾ ಪೋಲಿಸ ಠಾಣೆ |
| ವಾಸ | ಃ | ಕದ್ರಾ |

**ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರಿಂದ.**

1. ನಾನು ದಿಃ 24-01-2022 ರಿಂದ ದಿಃ 24-04-2025 ರವರೆಗೆ ಪಿ.ಎಸ್.ಐ ಆಗಿ ರಾಮನಗರ ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸಿರುತ್ತೇನೆ.

2. ದಿಃ 07-01-2024 ರಂದು ನಾನು ರಾತ್ರಿ 10-10 ಗಂಟೆಗೆ ಠಾಣಾ ಪ್ರಭಾದಲ್ಲಿದ್ದಾಗ, ಚಾಸಾ-1 ರವರು ಠಾಣೆಗೆ ಹಾಜರಾಗಿ ನೀಡಿದ ಗಣಕೀಕೃತ ದೂರನ್ನು ಪಡೆದು, ಠಾಣಾ ಗುನ್ನಾ ನಂಃ 04/2024 ರಂತೆ ಪ್ರಕರಣವನ್ನು ದಾಖಲಿಸಿ, ಪ್ರ.ವ.ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ಹಾಗೂ ನನ್ನ ಹಿರಿಯ ಅಧಿಕಾರಿಗೆ ಸಲ್ಲಿಸಿರುತ್ತೇನೆ.

3. ನಂತರ ಮರುದಿನ ಬೆಳಿಗ್ಗೆ 9.30 ರಿಂದ 11 ಗಂಟೆಯವರೆಗೆ ಖಾನಾಪೂರ ಸರ್ಕಾರಿ ಆಸ್ಪತ್ರೆಯಲ್ಲಿ ಅಪಘಾತದಲ್ಲಿ ಮೃತಪಟ್ಟ ವ್ಯಕ್ತಿಯ ಶವತನಿಖೆಯನ್ನು ನಡೆಸಿರುತ್ತೇನೆ. ಅದೇ ಸಮಯದಲ್ಲಿ ಚಾಸಾ 9 ರಿಂದ 11 ರವರ ಹೇಳಿಕೆಗಳನ್ನು ಪಡೆದಿರುತ್ತೇನೆ. ಸದರಿ ಪ್ರಕರಣ ಘೋರ ಪ್ರಕರಣವಾದ ಕಾರಣ, ಅದೇ ದಿನ ಚಾಸಾ-21 ರವರಿಗೆ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಹಸ್ತಾಂತರಿಸಿರುತ್ತೇನೆ.

4. ಸಾಕ್ಷಿಯು ದೂರನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-1 ಎಂದು ಗುರುತಿಸಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿಪಿ-1(ಬಿ)** ಎಂದು ಗುರುತಿಸಲಾಯಿತು

5. ಸಾಕ್ಷಿಯು ತಾನು ದಾಖಲಿಸಿದ ಪ್ರ.ವ.ವರದಿಯನ್ನು ನೋಡಿ ಗುರುತಿಸಿದ್ದು, ಅದನ್ನು ಈಗ **ನಿಪಿ-19** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿಪಿ-19(ಎ)** ಎಂದು ಗುರುತಿಸಲಾಯಿತು.

6. ಸಾಕ್ಷಿಯು ಶವ ತನಿಖಾ ವರದಿಯನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ಆರೋಪಿ ಪರ ವಕೀಲರು ಸಹಮತಿಯೊಂದಿಗೆ **ನಿಪಿ-7** ಎಂದು ಗುರುತಿಸಲಾಗಿದೆ,

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಎಂ.ಎಸ್.ಪಿ ವಕೀಲರಿಂದ**

7. ದೂರನ್ನು ನೀಡಲು ಚಾಸಾ-1 ರವರು ಮಾತ್ರ ಠಾಣೆಗೆ ಬಂದಿದ್ದರು. ನಿಪಿ-1 ದೂರನ್ನು ಠಾಣೆಯಲ್ಲಿಯೇ ಚಾಸಾ-1 ರವರ ಹೇಳಿಕೆಯ ಮೇರೆಗೆ ಗಣಕೀಕರಣ ಮಾಡಲಾಗಿರುತ್ತದೆ. ಅಪಘಾತದಲ್ಲಿ ಮೃತಪಟ್ಟ ವ್ಯಕ್ತಿಗೆ ದ್ವಿ-ಚಕ್ರ ವಾಹನ ಚಾಲನಾ ಪರವಾನಿಗೆ ಇರಲಿಲ್ಲ ಎಂದರೆ ನನಗೆ ಗೊತ್ತಿಲ್ಲ. ಸದರಿ ವಿಷಯ ಗೊತ್ತಿದ್ದರೂ ಸಹಿತ ಮೃತಪಟ್ಟವರ ಕುಟುಂಬಕ್ಕೆ ಸಹಾಯ ಮಾಡಲೆಂದು ಆರೋಪಿಯ ವಿರುದ್ಧ ನಿಪಿ 1 ನ್ನು ತಯಾರಿಸಲಾಗಿದೆ ಎಂದರೆ ಸರಿಯಲ್ಲ. ನಾನು ಯಾವುದೇ ಸಾಕ್ಷಿದಾರರ ಹೇಳಿಕೆಗಳನ್ನು ಪಡೆದಿರುವುದಿಲ್ಲವೆಂದರೆ ಸರಿಯಲ್ಲ.

8. ಆರೋಪಿಗೂ ಹಾಗೂ ಈ ಪ್ರಕರಣಕ್ಕೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ. ನಿಪಿ-1 ಸೃಷ್ಟಿತ ದಾಖಲೆ ಎಂದರೆ ಸರಿಯಲ್ಲ. ನಾನು ಆರೋಪಿಯ ವಿರುದ್ದ ಸುಳ್ಳು ಪ್ರ.ವ.ವರದಿ ತಯಾರಿಸಿ, ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲಾ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು)**

**ಓ.ಹೇ.ಕೇ. ಸರಿ ಇದೆ**

**ಸಹಿ ಇದೆ**

**(ತೇಜಸ್ವಿನಿ ಸೊಗಲದ)**
**ದಿವಾಣಿ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾ. ದಂಡಾಧಿಕಾರಿಗಳು,ದಾಂಡೇಲಿ.**